# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

**ದಿನಾಂಕ: 21.12.2021 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್ 70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ–ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ಹರೀಶ್ | ಬೀದಿದೀಪಗಳ ನಿರ್ವಹಣೆಯ ಗುತ್ತಿಗೆದಾರರು |
| 5 | ಉಮೇಶ್ ಎಸ್ | ಪೊಲೀಸ್ ಕಾನ್ಸ್ಟೇಬಲ್ |
| 6 | ಅಯ್ಯನ ಗೌಡ | ಪೊಲೀಸ್ ಕಾನ್ಸ್ಟೇಬಲ್ |
| 7 | ಸ್ವಾಮಿ | ಕಿರಿಯ ಆರೋಗ್ಯ ಪರಿವೀಕ್ಷಕರು |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ವಿಷಯ ಸಂಖ್ಯೆ: 1:– ಕೋವಿಡ್–19 ಬಗ್ಗೆ**

ಶ್ರೀ ಕೆ.ಶಿವಲಿಂಗಯ್ಯ, ಆರೋಗ್ಯ ಪರಿವೀಕ್ಷಕರು, ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯಲ್ಲಿ ಕೋವಿಡ್–19 ಕಾರಣದಿಂದಾಗಿ ಮರಣ ಹೊಂದಿರುವುವರ ಕುಟುಂಬಗಳಿಗೆ ಪರಿಹಾರ ನೀಡುವ ಬಗ್ಗೆ ಪ್ರಸ್ತಾಪಿಸಿ, ವಾರ್ಡ್ 70ರ ವ್ಯಾಪ್ತಿಯಲ್ಲಿ 77 ಮಂದಿ ಮೃತಪಟ್ಟಿದ್ದು, ಅದರಲ್ಲಿ 48 ಮಂದಿ ಕುಟುಂಬದವರು ಪರಿಹಾರಕ್ಕಾಗಿ ಅರ್ಜಿ ಸಲ್ಲಿಸಿದ್ದು ಇದರಲ್ಲಿ 28 ಅರ್ಜಿಗಳು ಅನುಮೋದನೆಗೊಂಡಿದ್ದು, 6 ಅರ್ಜಿಗಳನ್ನು ಅನುಮೋದನೆಗಾಗಿ ಸಲ್ಲಿಸಲಾಗಿದೆ ಇನ್ನುಳಿದ 14 ಅರ್ಜಿಗಳು ಪ್ರಕ್ರಿಯೆಯಲ್ಲಿರುತ್ತವೆ ಹಾಗೂ ಉಳಿದ 29 ಅರ್ಜಿಗಳನ್ನು ಅರ್ಜಿದಾರರು ಸಲ್ಲಿಸಿರುವುದಿಲ್ಲ ಎಂದು ಸಭೆಗೆ ತಿಳಿಸಿದರು.

ಮುಂದುವರೆದು ಮಾತನಾಡಿ ವಾರ್ಡ್ 70ರ ವ್ಯಾಪ್ತಿಯಲ್ಲಿ ಇದುವರೆವಿಗೂ ನಡೆದಿರುವ ಲಸಿಕಾಕರಣದ ಬಗ್ಗೆ ಮಾಹಿತಿ ನೀಡಿದರು. $1^{st}$ Dose-46599 ಜನರು ಹಾಗೂ $2^{nd}$ Dose-46774 ಜನರು ಲಸಿಕೆಯನ್ನು ಪಡೆದಿರುತ್ತಾರೆ.

<u>ವಿಷಯ ಸಂಖ್ಯೆ: 2:–</u> ಘನ ತ್ಯಾಜ್ಯ ನಿರ್ವಹಣೆ

ಶ್ರೀ ಕೆ.ಶಿವಲಿಂಗಯ್ಯ, ಆರೋಗ್ಯ ಪರಿವೀಕ್ಷಕರು, ಮಾತನಾಡಿ, ಎಲ್ಲೆಂದರಲ್ಲಿ ಕಸ ಎಸೆಯುವವರಿಂದ ಡಿಸೆಂಬರ್ ತಿಂಗಳಲ್ಲಿ 3100/– ರೂ.ಗಳನ್ನು ದಂಡವನ್ನು ಸಂಗ್ರಹಿಸಿರುವುದಾಗೀ ತಿಳಿಸಿದರು.

<u>ವಿಷಯ ಸಂಖ್ಯೆ: 3:–</u> ರಸ್ತೆಗುಂಡಿಗಳ ಬಗ್ಗೆ

ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿಮಾಡಿಕೊಂಡು, ಹಲವು ಕಡೆಗಳಲ್ಲಿ ವೆಟ್‌ಮಿಕ್‌ಅನ್ನು ಅಳವಡಿಸಲಾಗಿರುತ್ತದೆ. ಶೀಘ್ರದಲ್ಲಿ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

ಮುಂದುವರೆದು ನೋಡಲ್ ಅಧಿಕಾರಿ ರವರು ಮಾತನಾಡಿ, ಹೆಗ್ಗನಹಳ್ಳಿ ಮುಖ್ಯರಸ್ತೆಯಲ್ಲಿ ರಸ್ತೆಗುಂಡಿಗಳು ಹೆಚ್ಚಾಗಿದ್ದು, ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತುಂಬಾ ತೊಂದರೆಯಾಗಿರುತ್ತದೆ ಹಾಗೂ ರಸ್ತೆ ಬದಿಯ ಚರಂಡಿಗಳಲ್ಲಿ ಹೂಳು ತುಂಬಿದ್ದು ಈ ಬಗ್ಗೆ ದೂರುಗಳು ಬಂದಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ಹೆಗ್ಗನಹಳ್ಳಿ ಮುಖ್ಯರಸ್ತೆಯು ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಕಾರ್ಯವ್ಯಾಪ್ತಿಗೆ ಸೇರಿದ್ದು, ಸದರಿಯವರ ಗಮನಕ್ಕೆ ತಂದು ರಸ್ತೆಗುಂಡಿಗಳನ್ನು ಮುಚ್ಚಿಸಲು ಹಾಗೂ ಹೂಳು ತೆಗೆಸಲು ತಿಳಿಸಲಾಗುವುದೆಂದು ಸಭೆಗೆ ತಿಳಿಸಿದರು.

<u>ವಿಷಯ ಸಂಖ್ಯೆ: 4:–</u> ಕರೀಂ ಸಾಬ್ ಲೇಔಟ್ ಮುಖ್ಯರಸ್ತೆ ಹಾಗೂ ಮಸೀದಿ ರಸ್ತೆಯಲ್ಲಿ ಹೂಳು ತೆಗೆಯುವ ಬಗ್ಗೆ

ಕರೀಂ ಸಾಬ್ ಲೇಔಟ್ ಮುಖ್ಯರಸ್ತೆ ಹಾಗೂ ಮಸೀದಿ ರಸ್ತೆಯ ರಸ್ತೆ ಬದಿಯ ಚರಂಡಿಗಳಲ್ಲಿ ಹೂಳು ತುಂಬಿದ್ದು ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿರುತ್ತವೆ. ಆದರೆ ಸದರಿ ರಸ್ತೆಯು ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಕಾರ್ಯವ್ಯಾಪ್ತಿಗೆ ಸೇರಿದ್ದು, ಆದಾಗ್ಯೂ ಸದರಿ ಕಾರ್ಯವು ತುರ್ತು ಇದ್ದ ಕಾರಣ ಸದ್ಯಕ್ಕೆ ವಾರ್ಡ್ ವ್ಯಾಪ್ತಿಯಿಂದ ಹೂಳನ್ನು ತೆಗೆಸಲಾಗುತ್ತಿದೆ ಎಂದು ತಿಳಿಸಿದರು.

- ಇದಕ್ಕೆ ನೋಡಲ್ ಅಧಿಕಾರಿರವರು ಪ್ರತಿಕ್ರಿಯಿಸಿ ಹೆಗ್ಗನಹಳ್ಳಿ ಮುಖ್ಯರಸ್ತೆ ಹಾಗೂ ಕರೀಂ ಸಾಬ್ ಲೇಔಟ್ ಮುಖ್ಯರಸ್ತೆಗಳ ರಸ್ತೆ ಬದಿಯ ಚರಂಡಿಗಳಲ್ಲಿ ಶೇಖರಣೆಯಾಗಿರುವ ಹೂಳನ್ನು ತೆಗೆಸುವಂತೆ ರಸ್ತೆ ಮೂಲಭೂತ ಸೌಕರ್ಯ ವಿಭಾಗರವರಿಗೆ ಪತ್ರ ಬರೆಯುವಂತೆ ಕಾರ್ಯದರ್ಶೀ ರವರಿಗೆ ಸೂಚಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ 70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ವಾರ್ಡ್ ನಂ.70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಪ್ರತಿಯನ್ನು:**

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ